ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಸಣ್ಣ, ಬಂದರು ಮತ್ತು ಒಳನಾಡು ಸಾರಿಗೆ ಮತ್ತು ಕಡಲ ತೀರಗಳ ಅಭಿವೃದ್ಧಿ ಬಗ್ಗೆ

ಶ್ರೀ ತಿಪ್ಪೇಸ್ವಾಮಿ ಕೆ.ಎ. (ನಾಮನಿರ್ದೇಶನ ಹೊಂದಿದವರು):-

238 (305) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸಣ್ಣ ಬಂದರು, ಒಳನಾಡು ಸಾರಿಗೆ ಮತ್ತು ಕಡಲ ತೀರಗಳ ಅಭಿವೃದ್ಧಿ ಬೆಳವಣಿಗೆಗೆ The Karnataka Maritime Board ನ್ನು ಸ್ಥಾಪಿಸಲಾಗಿದೆಯೇ; ಹಾಗೂ ಈ ಬೋರ್ಡ್‌ಗೆ ಪದಾಧಿಕಾರಿಗಳನ್ನು ನೇಮಿಸಲಾಗಿದೆಯೇ; ನೇಮಿಸಿದ್ದಲ್ಲಿ (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಒಟ್ಟು ಬೃಹತ್ ಮತ್ತು ಸಣ್ಣ ಬಂದರುಗಳೆಷ್ಟು; ಈ ಬಂದುರಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಯಾವುದಾದರೂ ಅಭಿವೃದ್ಧಿ ಯೋಜನೆಗಳನ್ನು ರೂಪಿಸಿದೆಯೇ ; ರೂಪಿಸಿದ್ದಲ್ಲಿ ಈ ಯೋಜನೆಯನ್ನು ಯಾವ ಸಂಸ್ಥೆಯಿಂದ ನಿರ್ವಹಿಸಲಾಗಿದೆ; ಈ ಯೋಜನಾ ವರದಿಯ ಸಂಕ್ಷಿಪ್ತ ವಿವರ ನೀಡುವುದು ;

(ಇ) ಕೇಂದ್ರ ಸರ್ಕಾರದ `ಸಾಗರ ಮಾಲಾ ಯೋಜನೆ' ಯಡಿ ಯಾವ ಯಾವ ಬಂದರುಗಳನ್ನು ಮತ್ತು ಕಡಲ ತೀರಗಳನ್ನು ಅಭಿವೃದ್ಧಿಪಡಿಸಲಾಗುತ್ತದೆ? (ವಿವರ ನೀಡುವುದು)